# ಕರ್ನಾಟಕ ಸರ್ಕಾರದ ನಡವಳಿಕೆಗಳು

**ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ ೧೨ ಸೇಸವಿ ೯೨, ಬೆಂಗಳೂರು, ದಿನಾಂಕ ೧೧-೧೨-೧೯೯೨ ಓದಲಾಗಿದೆ :**

**ವಿಷಯ :** ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸುವ ಸರ್ಕಾರಿ ನೌಕರರಿಗೆ ವಿಶೇಷ ಸಾಂದರ್ಭಿಕ ರಜೆ ಪರಿಗಣಿಸುವ ಬಗ್ಗೆ.

೧) ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯದರ್ಶಿಯವರ ಪತ್ರ ಸಂಖ್ಯೆ : ಕಸಾಪ : ದಾಸಾಸ : ೫೨ : ೯೧-೯೨ : ೨೧೫೩, ದಿನಾಂಕ ೨೭-೧೨-೧೯೯೧.
೨) ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರ ಪತ್ರ ಸಂಖ್ಯೆ : ಕಸಾಪ : ದಾಸಾಸ : ೫೨ : ೯೧-೯೨ : ೧೮೮, ದಿನಾಂಕ ೮-೫-೧೯೯೨.
೩) ಸರ್ಕಾರಿ ಆದೇಶ ಸಂಖ್ಯೆ : ಡಿಪಿಎಆರ್ ೮ ಎಸ್‌ಬಿಎಂ ೮೫, ದಿನಾಂಕ ೧೧-೨-೧೯೮೬.
೪) ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ ೧೨ ಸೇಸವಿ ೯೨, ದಿನಾಂಕ ೩-೯-೧೯೯೨.

**ಪ್ರಸ್ತಾವನೆ :**

**ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು ಹಾಗೂ ಕಾರ್ಯದರ್ಶಿ ಇವರು ಈ ಮೇಲೆ ಕ್ರಮಸಂಖ್ಯೆ : (೧) ಮತ್ತು (೨) ರಲ್ಲಿ ಓದಲಾಗಿರುವ ಪತ್ರಗಳಲ್ಲಿ ಪ್ರತಿವರ್ಷ ನಡೆಯುವ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸುವ ಸರ್ಕಾರಿ ನೌಕರರಿಗೆ ವಿಶೇಷ ಸಾಂದರ್ಭಿಕ ರಜದ ಸೌಲಭ್ಯವನ್ನು ಮಂಜೂರು ಮಾಡುವಂತೆ ಕೋರಿದ್ದಾರೆ. ಕ್ರಮಸಂಖ್ಯೆ : (೩) ರಲ್ಲಿ ಓದಲಾಗಿರುವ ಸರ್ಕಾರಿ ಆದೇಶದಲ್ಲಿ ಆದೇಶಿಸಿರುವಂತೆ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸುವ ಸರ್ಕಾರಿ ನೌಕರರ ಸಂಖ್ಯೆ ೧೦೦ಕ್ಕೆ ಮೀರದಂತೆ ವಿಶೇಷ ಸಾಂದರ್ಭಿಕ ರಜದ ಸೌಲಭ್ಯವನ್ನು ನೀಡಲಾಗುತ್ತಿದೆ. ಕನ್ನಡ ಆಡಳಿತ ಭಾಷೆಯಾಗಿರುವ ಈ ಸಂದರ್ಭದಲ್ಲಿ ಕನ್ನಡ ಸಾಹಿತ್ಯದ ಜ್ಞಾನ ಅಭಿರುಚಿ ಮತ್ತು ಆಸಕ್ತಿಯುಳ್ಳ ನೌಕರರು ಈ ಸಮ್ಮೇಳನದಲ್ಲಿ ಹೆಚ್ಚು ಹೆಚ್ಚಾಗಿ ಭಾಗವಹಿಸಲು ಅನುಕೂಲವಾಗುವಂತೆ ಈಗಿರುವ ನೂರರ ಮಿತಿಯನ್ನು ತೆಗೆದು ಹೆಚ್ಚಿನ ಸರ್ಕಾರಿ ನೌಕರರಿಗೆ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸಲು ರಜೆಯ ಸೌಲಭ್ಯವನ್ನು ವಿಸ್ತರಿಸಲು ಕೋರಿದೆ. ಸರ್ಕಾರವು ವಿಷಯವನ್ನು ಸಮಗ್ರವಾಗಿ ಪರಿಶೀಲಿಸಿ ಉಲ್ಲೇಖ (೪) ರಲ್ಲಿ ತಿಳಿಸಿರುವ ದಿನಾಂಕ ೩-೯-೧೯೯೨ರ ಆದೇಶದಲ್ಲಿ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸುವ ಸರ್ಕಾರಿ ನೌಕರರಿಗೆ ವಿಶೇಷ ಸಾಂದರ್ಭಿಕ ರಜೆ ಮಂಜೂರು ಮಾಡಲು ಅನುಮತಿಯನ್ನು ಕೊಡಲಾಗಿತ್ತು.**

## ಆದೇಶ

ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸುವ ಸರ್ಕಾರಿ ನೌಕರರಿಗೆ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಲು ಹೊರಡಿಸಲಾಗಿರುವ ಆದೇಶ ಸಂಖ್ಯೆ : ಸಿಆಸುಇ ೧೨ ಸೇಸವಿ ೯೨, ದಿನಾಂಕ ೩-೯-೧೯೯೨ ರಲ್ಲಿ ಕೆಲವೊಂದು ಆಕಸ್ಮಿಕ ತಪ್ಪುಗಳಿದ್ದುದರಿಂದ ಅದನ್ನು ಹಿಂತೆಗೆದುಕೊಂಡು, ಮರುಪರಿಶೀಲಿಸಿ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸುವ ಸರಕಾರಿ ನೌಕರರಿಗೆ ಈ ಕೆಳಗಿನ ಷರತ್ತುಗಳಿಗೊಳಪಟ್ಟು ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಲು ಸರ್ಕಾರವು ಆದೇಶಿಸಿದೆ :

೧) ವಿಶೇಷ ಸಾಂದರ್ಭಿಕ ರಜೆಯು, ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸುವ ನೌಕರರು ಅವರ ಆಸಕ್ತಿಯ ಒಂದು ಅಥವಾ ಎರಡು ದಿನಗಳ ಅವಧಿಗೆ ಮತ್ತು ಹೋಗಿಬರುವ ಪ್ರಯಾಣಕ್ಕೆ ಬೇಕಾಗುವ ಅವಧಿಗೆ ಸೀಮಿತವಾಗಿರಬೇಕು.

೨) ಕನ್ನಡ ಸಾಹಿತ್ಯದ ಜ್ಞಾನ ಮತ್ತು ಅಭಿರುಚಿ ಇದ್ದು ಕನ್ನಡ ಸಾಹಿತ್ಯ ಪರಿಷತ್ತಿನಿಂದ ಆಮಂತ್ರಿಸಲ್ಪಟ್ಟ ಸರ್ಕಾರಿ ನೌಕರರಿಗೆ ಈ ರಜೆಯ ಸೌಲಭ್ಯ ನೀಡುವುದು.

೩) ಕನ್ನಡ ಸಾಹಿತ್ಯದ ಅಭಿರುಚಿಯುಳ್ಳ ನೌಕರರು ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯರಾಗಿದ್ದರೆ ಅವರಿಗೂ ಈ ಸೌಲಭ್ಯ ನೀಡುವುದು.

೪) ಯಾವುದೇ ವಿಶೇಷ ಗುರುತರ ಸರ್ಕಾರಿ ಕೆಲಸದ ಮೇಲೆ ನೇಮಿಸಲ್ಪಟ್ಟ ನೌಕರರಿಗೆ ಸಮ್ಮೇಳನದಲ್ಲಿ ಭಾಗವಹಿಸಲು ಅನುಮತಿ ಕೊಡಬಾರದು. ಮತ್ತು

೫) ಈ ಸಮ್ಮೇಳನ ಮುಗಿದಮೇಲೆ ಸಮ್ಮೇಳನದಲ್ಲಿ ಭಾಗವಹಿಸಿದ ಸರ್ಕಾರಿ ನೌಕರರಿಗೆ ಸಾಹಿತ್ಯ ಪರಿಷತ್ತಿನವರು ಅಧಿಕೃತ ಹಾಜರಿಪತ್ರ ಕೊಡಬೇಕು ಈ ಆಧಾರದ ಮೇಲೆ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡುವ ಅಧಿಕಾರವುಳ್ಳ ಅಧಿಕಾರಿಗಳು ಈ ರಜೆಯನ್ನು ಮಂಜೂರು ಮಾಡುವುದು, ಹಾಗೂ ಈ ರಜೆ ಪಡೆಯಲಿಚ್ಛಿಸುವ ನೌಕರರು ರಜೆ ಮಂಜೂರು ಮಾಡುವ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆಯತಕ್ಕದ್ದು.

**೨. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : ಆಇ ೩೨೨೨ ವೆಚ್ಚ-೫ : ೯೨, ದಿನಾಂಕ ೧೦-೮-೧೯೯೨ ರಲ್ಲಿ ಕೊಟ್ಟಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಸಹಿ :

**(ಹ. ಮ. ಚಿಕ್ಕಬಸವಯ್ಯ)**

ಸರ್ಕಾರದ ಉಪ ಕಾರ್ಯದರ್ಶಿ

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು)

ಇವರಿಗೆ : ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ—

ಪ್ರತಿ : ೧) ಸರ್ಕಾರದ ಎಲ್ಲಾ ಆಯುಕ್ತರು, ಕಾರ್ಯದರ್ಶಿಗಳಿಗೆ- ೨) ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ- ೩) ಅಧ್ಯಕ್ಷರು, ಕ.ಸಾ.ಪ., ಬೆಂಗಳೂರು-೧೮- ೪) ಶಾಖಾ ರಕ್ಷಾ ಕಡತ- ೫) ಹೆಚ್ಚುವರಿ ಪ್ರತಿಗಳು- ೬) ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯವರ ಆಪ್ತ ಸಹಾಯಕರು.